ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಪೋಡಿಗಾಗಿ ಸಲ್ಲಿಕೆ ಮಾಡಿರುವ ಅರ್ಜಿಗಳ ವಿಲೇವಾರಿ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

93 (823) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕಳೆದ 3 ವರ್ಷಗಳಿಂದ ಹಾಸನ ಜಿಲ್ಲೆಯಲ್ಲಿ ಪೋಡಿಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳೆಷ್ಟು ; ಇದರಲ್ಲಿ ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ; ಬಾಕಿ ಇರುವ ಅರ್ಜಿಗಳೆಷ್ಟು ; ಬಾಕಿ ಇರುವ ಅರ್ಜಿಗಳನ್ನು ವಿಲೇವಾರಿ ಮಾಡುವುದು ಯಾವಾಗ ; (ಹೋಬಳಿವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಪೋಡಿಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಇತ್ಯರ್ಥಪಡಿಸಲು ಕಾಲಮಿತಿ ಇದೆಯೇ ; ಕಾಲಮಿತಿಯೊಳಗೆ ಅರ್ಜಿಗಳನ್ನು ವಿಲೇವಾರಿ ಮಾಡದ ಎಷ್ಟು ಜನ ಅಧಿಕಾರಿಗಳ ವಿರುದ್ಧ ಸಿ.ಸಿ.ಎ. ನಿಯಮಾವಳಿ ಅನ್ವಯ ಕ್ರಮ ಕೈಗೊಳ್ಳಲಾಗಿದೆ ;

(ಇ) ಪೋಡಿಗಾಗಿ ಬಾಕಿ ಇರುವ ಅರ್ಜಿಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ಹಾಸನ ಜಿಲ್ಲೆಯಲ್ಲಿರುವ ಪೋಡಿ ಮುಕ್ತ ಗ್ರಾಮಗಳ ಸಂಖ್ಯೆ ಎಷ್ಟು ?